**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:- ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇಲ್ಲಿನ ನಿರ್ದೇಶಕರನ್ನು ಇಲಾಖಾ ಮುಖ್ಯಸ್ಥರೆಂದು ಘೋಷಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 9 ಪವಯೋ 2010 ದಿನಾಂಕ: 26-10-2010
2. ಸರ್ಕಾರದ ಆದೇಶ ಸಂಖ್ಯೆ: ಸಕಇ 251 ಪವಯೋ 2011 ದಿನಾಂಕ: 29-02-2012
3. ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರ ಪತ್ರ ಸಂಖ್ಯೆ: ಟಿಆರ್‌ಐ/ಸಿಆರ್-6/2012-13 ದಿನಾಂಕ: 24-4-2012, 15-11-2012 ಹಾಗೂ 17-4-2013

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ಆದೇಶದಲ್ಲಿ ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆಗೆ ವಿವಿಧ ವೃಂದದ ಒಟ್ಟು 22 ಹುದ್ದೆಗಳನ್ನು ಸೃಜಿಸಿ ಸದರಿ ಸಂಸ್ಥೆಯನ್ನು ಮೈಸೂರು ನಗರದಲ್ಲಿ ಸ್ಥಾಪಿಸಲು ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರಲ್ಲಿನ ಆದೇಶದಲ್ಲಿ ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರನ್ನು ಸಂಸ್ಥೆಯ ಮುಖ್ಯಸ್ಥರು ಎಂದು ಸರ್ಕಾರವು ಘೋಷಿಸಿ ಮತ್ತು ಇವರಿಗೆ ಲೆಕ್ಕ ಶೀರ್ಷಿಕೆ 2225-02-800-0-01 (ಯೋಜನೆ) ಅಡಿಯಲ್ಲಿ ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇದ 17ಸಿ, 49 ಮತ್ತು 50 ರನ್ವಯ ಮಹಾಲೇಖಪಾಲರ ಪ್ರಾಧಿಕಾರ ಪಡೆಯುವ ಷರತ್ತಿಗೊಳಪಟ್ಟು ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರವನ್ನು ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿನ ಪತ್ರದಲ್ಲಿ ಗಿರಿಜನ ಸಂಶೋಧನಾ ಸಂಸ್ಥೆಯು ಬುಡ್ಡಕಟ್ಟು ಜನಾಂಗದವರಿಗೆ ಸಂಬಂಧಿಸಿದಂತೆ ಸಂಶೋಧನೆ, ತರಬೇತಿ, ಮೌಲ್ಯಮಾಪನ, ವಿಚಾರಗೋಷ್ಠಿ/ಕಾರ್ಯಗಾರ ಕುಲಶಾಸ್ತ್ರೀಯ ಅಧ್ಯಯನ, ಇತ್ಯಾದಿ ವಿಷಯಗಳ ಬಗ್ಗೆ ಇನ್ನೂ ಹೆಚ್ಚಿನ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವ ಸಲುವಾಗಿ ನಿರ್ದೇಶಕರನ್ನು ಇಲಾಖಾ ಮುಖ್ಯಸ್ಥರೆಂದು ಘೋಷಿಸುವಂತೆ ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 251 ಪವಯೋ 2013 ಬೆಂಗಳೂರು, ದಿನಾಂಕ: 19-11-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇಲ್ಲಿನ ನಿರ್ದೇಶಕರನ್ನು ಕರ್ನಾಟಕ ನಾಗರಿಕ ಸೇವಾ ನಿಯಮಗಳ (1958) ನಿಯಮ 8(21) ರನ್ವಯ ಇಲಾಖಾ ಮುಖ್ಯಸ್ಥರೆಂದು ಈ ತಕ್ಷಣದಿಂದ ಜಾರಿಗೆ ಬರುವಂತೆ ಘೋಷಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 466 ವೆಚ್ಚ 2013 ದಿನಾಂಕ: 21-10-2013 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

**(ಎನ್. ನರಸಿಂಹಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-2(ಪ್ರ)
ಸಮಾಜ ಕಲ್ಯಾಣ ಇಲಾಖೆ
19/11/13

ಗೆ: ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರಗಾರ, ಬೆಂಗಳೂರು (ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಕಳುಹಿಸಿಕೊಡುವಂತೆ ಕೋರುತ್ತಾ

ಪ್ರತಿ:-

1. ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕೃಷಿ ಭವನ, ಬೆಂಗಳೂರು.
3. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
4. ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ನಂ.1540, ಅನಿಕೇತನ ರಸ್ತೆ, ಕುವೆಂಪು ನಗರ, ಮೈಸೂರು.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.
6. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಖನಿಜಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಮೈಸೂರು ಜಿಲ್ಲೆ.
8. ಶಾಖಾ ರಕ್ಷಾ ಕಡತ.
9. ಹೆಚ್ಚುವರಿ ಪ್ರತಿ-03.